# ದಿನಾಂಕ: 14-07-2010ರಂದು ಪೂರ್ವಾಹ್ನ: 11-00 ಗಂಟೆಗೆ ಹೇಮಾವತಿ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳು

ಅಧ್ಯಕ್ಷತೆ: ಶ್ರೀ ಹೆಚ್.ವೈ.ಚಂದ್ರಶೇಖರ್
ಅಧ್ಯಕ್ಷರು
ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ

ಹಾಜರಿ 07 ಗೈರು ಹಾಜರಿ 00

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಉಪ ಕಾರ್ಯದರ್ಶಿ(ಆಡಳಿತ)ರವರು ಸಭೆಯಲ್ಲಿ ಹಾಜರಿದ್ದ ಮಾನ್ಯ ಸಮಿತಿ ಅಧ್ಯಕ್ಷರು, ಸದಸ್ಯರು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಯವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆಯನ್ನು ವಹಿಸಿ ಸಭೆಯನ್ನು ನಡೆಸಿಕೊಡಬೇಕೆಂದು ಮಾನ್ಯ ಸಮಿತಿ ಅಧ್ಯಕ್ಷರನ್ನು ಕೋರಿದರು. | |
| 1 | 2010-11ನೇ ಸಾಲಿಗೆ ನಿಗದಿಯಾದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ವ್ಯಾಪ್ತಿಗೊಳಪಡುವ ಇಲಾಖೆಗಳ ಕ್ರಿಯಾ ಯೋಜನೆಗಳ ಅನುಮೋದನೆ ಬಗ್ಗೆ. | ಟಿಪ್ಪಣಿ ಸಂಖ್ಯೆ: ಯೋವಿ(3)ಸಾನ್ಯಾಸ್ಥಾಸ ಕ್ರಿಯೋ/72-74/2010-11 ದಿನಾಂಕ: 07-06-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಯೋಜನಾ ಅಂದಾಜು ಮತ್ತು ಮೌಲ್ಯಮಾಪನ ಅಧಿಕಾರಿಯವರು 2010-11ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಸಂಬಂಧಿಸಿದಂತೆ, ಕ್ರಿಯಾ ಯೋಜನೆಗಳನ್ನು ಅನುಮೋದನೆ ನೀಡುವಂತೆ ಕೋರಿ ಸಭೆಗೆ ಮಂಡಿಸಿದರು.<br>ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಸಮಾಜ ಕಲ್ಯಾಣ ಇಲಾಖೆ ಮತ್ತು ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಯಡಿ ಕಟ್ಟಡ ಯೋಜನೆಯಡಿ ಕಟ್ಟಡಗಳ ದುರಸ್ಥಿ ಕಾಮಗಾರಿಗಳನ್ನು 6 ತಿಂಗಳ ಒಳಗಾಗಿ ಅನುಷ್ಠಾನ ಮಾಡಲು ಕ್ರಮ ವಹಿಸಬೇಕೆಂದು ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರುಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಬೇಕೆಂದು ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ತಿಳಿಸಿದರು.<br>ಮಾನ್ಯ ಸಮಿತಿ ಅಧ್ಯಕ್ಷರು ಮಾತನಾಡುತ್ತಾ, ಖಾಸಗಿ ಶಾಲೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮಕ್ಕಳನ್ನು ದಾಖಲು ಮಾಡಿಕೊಳ್ಳಲಾಗುತ್ತಿದೆಯೇ ಎಂಬ ಬಗ್ಗೆ ವಿವರ ಒದಗಿಸುವಂತೆ ತಿಳಿಸಿದರು. | ಸಭೆಯಲ್ಲಿ 2010-11ನೇ ಸಾಲಿಗೆ ಕ್ರಿಯಾ ಯೋಜನೆಗಳಿಗೆ ಅನುಮೋದನೆ ನೀಡುವ ಬಗ್ಗೆ ವಿವರವಾಗಿ ಪರಿಶೀಲಿಸಲಾಯಿತು.<br>ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ ಪಾಠವನ್ನು ಹೇಳಿ ಕೊಡಲು ಸಮಾಜ ಕಲ್ಯಾಣ ಇಲಾಖೆಯಡಿ ನಿಗದಿಪಡಿಸಿರುವಂತೆ ಮಾಹೆಯಾನ ರೂ.1000.00ರಂತೆ ಮತ್ತು ಇದಕ್ಕಾಗಿ ಅವಶ್ಯವಿರುವ ಅನುದಾನವನ್ನು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ನಿರ್ವಹಣೆಗೆ ನಿಗದಿ ಪಡಿಸಿರುವ ಅನುದಾನದಲ್ಲಿ ರೂ.1.00ಲಕ್ಷಗಳನ್ನು ವಿನಿಯೋಗಿಸಲು ಅನುಮತಿ ನೀಡುವಂತೆ ಕೋರಿ ಸರ್ಕಾರಕ್ಕೆ ಮತ್ತು ಹಿಂದುಳಿದ ವರ್ಗಗಳ ನಿರ್ದೇಶನಾಲಯಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು / ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

| | | | |
|---|---|---|---|
| | | ವಿದ್ಯಾರ್ಥಿನಿಲಯಗಳಿಗೆ ಅವಶ್ಯವಿರುವ ಗ್ರೂಪ್-ಡಿ ನೌಕರರನ್ನು ಜಿಲ್ಲಾಧಿಕಾರಿ ಯವರಿಂದ ಅನುಮೋದನೆ ಪಡೆದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಮೂಲಕ ನೇಮಕ ಮಾಡಲು ಕ್ರಮ ವಹಿಸುವಂತೆ ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ ಮತ್ತು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರಿಗೆ ತಿಳಿಸಿದರು,<br>2009-10ನೇ ಸಾಲಿನಲ್ಲಿ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಕಾಮಗಾರಿಗಳನ್ನು ಅನುಷ್ಠಾನ ಮಾಡಿರುವ ವಿವರಗಳನ್ನು ನೀಡಬೇಕೆಂದು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರಿಗೆ ಸೂಚಿಸಿದರು.<br>2010-11ನೇ ಸಾಲಿಗೆ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ನಿಗದಿಪಡಿಸಿರುವ ಅನುದಾನಕ್ಕೆ ತ್ವರಿತವಾಗಿ ಕ್ರಿಯಾ ಯೋಜನೆಯನ್ನು ಸಿದ್ದಪಡಿಸಿ ತಾಲ್ಲೂಕು ಪಂಚಾಯಿತಿ ಸಾಮಾನ್ಯ ಸಭೆಯಲ್ಲಿ ಅನುಮೋದನೆ ಪಡೆದು ದಿನಾಂಕ: 15-08-2010ರ ಒಳಗಾಗಿ ಜಿಲ್ಲಾ ಪಂಚಾಯಿತಿಗೆ ಅನುಮೋದನೆಗಾಗಿ ಕಳುಹಿಸಿಕೊಡಲು ಕ್ರಮ ವಹಿಸಬೇಕೆಂದು ಕಾರ್ಯನಿರ್ವಾಹಕ ಅಧಿಕಾರಿ/ ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಯವರು ಕ್ರಮ ವಹಿಸಬೇಕೆಂದು ಮತ್ತು ಈ ಬಗ್ಗೆ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ಮೇಲುಸ್ತುವಾರಿಯನ್ನು ವಹಿಸಿ ಎಲ್ಲಾ ತಾಲ್ಲೂಕುಗಳಿಂದ ಕ್ರಿಯಾ ಯೋಜನೆಯನ್ನು ತ್ವರಿತವಾಗಿ ಕಳುಹಿಸುವ ಬಗ್ಗೆ ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿಯವರಿಗೆ ನಿರ್ದೇಶನ ನೀಡಬೇಕೆಂದು ತಿಳಿಸಿದರು.<br>ಪ್ರಸಕ್ತ ಸಾಲಿಗೆ ವಿಶೇಷ ಘಟಕ ಯೋಜನೆಯಡಿ ಕೃಷಿ ಇಲಾಖೆಗೆ ಸಂಬಂಧಿಸಿದಂತೆ, ವೈಯಕ್ತಿಕ ಸವಲತ್ತುಗಳ ವಿತರಣೆ ಕಾರ್ಯಕ್ರಮದಲ್ಲಿ ಈಗ ಮಳೆಗಾಲವಾಗಿದ್ದು, ಪರಿಶಿಷ್ಟ ಜಾತಿ/ ವರ್ಗದ ಫಲಾನುಭವಿಗಳಿಗೆ ತ್ವರಿತವಾಗಿ ಕೃಷಿ ಪರಿಕರಗಳನ್ನು ವಿತರಣೆ ಮಾಡಲು ಕ್ರಮ ವಹಿಸಬೇಕೆಂದು ತಾಂತ್ರಿಕ ಸಹಾಯಕರು, ಕೃಷಿ ಇಲಾಖೆ, ಹಾಸನ ಇವರಿಗೆ ತಿಳಿಸಿದರು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ಇಲಾಖೆ, ಹಾಸನ ಇವರು ಪ್ರಸ್ತಾಪಿಸುತ್ತಾ, ಇಲಾಖೆಗೆ ಲಿಂಕ್ ಪುಸ್ತಕದಲ್ಲಿ ಕಚೇರಿ ನಿರ್ವಹಣೆಗೆ ಅನುದಾನ ಕಡಿಮೆ ನಿಗದಿಪಡಿಸಲಾಗಿದೆ. ಇದರಿಂದ, ಕಛೇರಿ ಬಾಡಿಗೆ, ಇಂಧನ, ಮತ್ತು ಇತರೆ ವೆಚ್ಚಗಳನ್ನು ಭರಿಸಲು ಸಾಧ್ಯವಾಗುವುದಿಲ್ಲವೆಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಪರ್ವತಯ್ಯರವರು ಮಾತನಾಡುತ್ತಾ, ಸಮಾಜ ಕಲ್ಯಾಣ ಇಲಾಖೆ ಮತ್ತು ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿನಿಲಯದ ಮಕ್ಕಳಿಗೆ ಟ್ಯೂಷನ್ ಹೇಳಿಕೊಡಲು | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶ್ರೀ ಕೃಷ್ಣ ಅಂಧ ಮಕ್ಕಳ ಶಾಲೆಗೆ ಕೊರತೆಯಾಗುವ ಅನುದಾನ ರೂ.8.00ಲಕ್ಷ ಗಳನ್ನು ಬಿಡುಗಡೆ ಮಾಡು ವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನು ಮತದಿಂದ ತೀರ್ಮಾನಿಸಿತು.<br>2010-11ನೇ ಸಾಲಿಗೆ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ವ್ಯಾಪ್ತಿ ಗೊಳಪಡುವ ಇಲಾಖೆಗಳಾದ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ಇಲಾಖೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳ ಕ್ರಿಯಾ ಯೋಜನೆ ಗಳನ್ನು ಸಭೆಯು ಸರ್ವಾನು ಮತದಿಂದ ಅನುಮೋದಿ ಸಿತು. |

| | | | |
|---|---|---|---|
| | | ಹಾಜರಾತಿ, ದಾಸ್ತಾನು ವಹಿ, ವಿಜಿಟರ್ಸ್ ವಹಿ ಮೊದಲಾದವುಗಳನ್ನು ಪರಿಶೀಲನೆ ಸಮಯದಲ್ಲಿ ನೀಡಲು ನಿರ್ದೇಶನ ನೀಡಬೇಕೆಂದು ತಿಳಿಸಿದರು.<br>ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರು ಇಲಾಖೆಯಡಿ ಶ್ರೀ ಕೃಷ್ಣ ಅಂಧ ಮಕ್ಕಳ ಶಾಲೆಗೆ ಸುಮಾರು ರೂ.20.00ಲಕ್ಷಗಳು ಬೇಕಾಗಿದ್ದು, ಲಿಂಕ್ ಪುಸ್ತಕದಲ್ಲಿ ಕೇವಲ ರೂ.11.00ಲಕ್ಷ ಮಾತ್ರ ನಿಗದಿಯಾಗಿರುತ್ತದೆ. ಆದ್ದರಿಂದ, ಕೊರತೆಯಾಗುವ ಅನುದಾನವನ್ನು ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲೆಯಲ್ಲಿ 50 ಗ್ರಾಮ ಪಂಚಾಯಿತಿಗಳನ್ನು ಆಯ್ಕೆ ಮಾಡಿ ಸಮಗ್ರ ಅಭಿವೃದ್ಧಿ ಪಡಿಸಲು ಉದ್ದೇಶಿಸಲಾಗಿದ್ದು, ಇದಕ್ಕಾಗಿ ಸರ್ಕಾರದಿಂದ, ಮಂಜೂರಾಗುವ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲು ಜಿಲ್ಲಾ ಮಟ್ಟದ ಅಥವಾ ತಾಲ್ಲೂಕು ಮಟ್ಟದ ಅಧಿಕಾರಿಯವರಿಗೆ ಒಂದೊಂದು ಗ್ರಾಮ ಪಂಚಾಯಿತಿಯನ್ನು ದತ್ತು ನೀಡಲಾಗುವುದು. ಅಲ್ಲದೆ, ತಾಲ್ಲೂಕು ಮಟ್ಟದಲ್ಲಿ ವಿಡಿಯೋ ಕಾನ್ಫರೆನ್ಸ್ ಕೂಡ ಅಳವಡಿಸಲಾಗುವುದು. ಇದರ ಮೂಲಕ ಜಿಲ್ಲಾ ಮಟ್ಟದಿಂದಲೇ ಎಲ್ಲಾ ತಾಲ್ಲೂಕುಗಳಲ್ಲಿ ಅನುಷ್ಠಾನ ಮಾಡುತ್ತಿರುವ ಯೋಜನೆಗಳ ಪ್ರಗತಿಯ ಬಗ್ಗೆ ಪರಿಶೀಲಿಸಲು ಅನುಕೂಲವಾಗುವುದು. ಇದರಲ್ಲಿ ಜನ ಪ್ರತಿನಿಧಿಗಳೂ ಸಲಹೆ ಸಹಕಾರ ನೀಡಬೇಕೆಂದು ಕೋರಿದರು. ಇದರ ಬಗ್ಗೆ ಎಲ್ಲಾ ವಿವರಗಳನ್ನೊಳಗೊಂಡ ಕಿರು ಹೊತ್ತಿಗೆಯನ್ನು ಸಹ ಸಿದ್ದಪಡಿಸಿ ನೀಡಲಾಗುವುದು ಎಂದು ತಿಳಿಸಿದರು. | |
| | | ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | |

(ಹೆಚ್.ವೈ ಚಂದ್ರಶೇಖರ್)
ಅಧ್ಯಕ್ಷರು
ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
ಜಿಲ್ಲಾ ಪಂಚಾಯಿತಿ, ಹಾಸನ